ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	22
ಸದಸ್ಯರ ಹೆಸರು	ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	07-12-2020
ಉತ್ತರಿಸಬೇಕಾದ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಪ್ರಶ್ನೆ	ಉತ್ತರ
ಅ) 1995ರ ನಂತರ ಪ್ರಾರಂಭವಾದ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;	ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ : ಅಇ 157 ವೆಚ್ಚ-8/2020, ದಿನಾಂಕ :10.06.2020ರಂತೆ ತಾತ್ಕಾಲಿಕವಾಗಿ ವೇತನಾನುದಾನಕ್ಕೆ ಒಳಪಡಿಸುವ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿದೆ.
ಆ) ಈ ಶಾಲಾ ಕಾಲೇಜಿಗಳಲ್ಲಿ ಕಳೆದ 25 ವರ್ಷಗಳಿಂದ ಸಿಬ್ಬಂದಿಗಳು ಕಡಿಮೆ ವೇತನಕ್ಕೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಖಾಸಗಿ ಅನುದಾನರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು/ಉಪನ್ಯಾಸಕರುಗಳಿಗೆ ಆ ಹುದ್ದೆಯ ಕನಿಷ್ಠ ವೇತನವನ್ನು ಪಾವತಿ ಮಾಡುವಂತೆ ಕರ್ನಾಟಕ ಶಿಕ್ಷಣ ಕಾಯ್ದೆ 1983 ಸೆಕ್ಷನ್ 89ರಡಿ 1999ರಲ್ಲಿ ನಿಯಮಗಳನ್ನು ರೂಪಿಸಲಾಗಿದ್ದು, ಅದರಂತೆ, ರಾಜ್ಯದಲ್ಲಿನ ಎಲ್ಲಾ ಖಾಸಗಿ ಅನುದಾನ ರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಕನಿಷ್ಠ ವೇತನವನ್ನು ನೀಡಬೇಕಾಗಿರುತ್ತದೆ.
ಇ) ಬಂದಿದ್ದಲ್ಲಿ, ಇವರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ 1995ರ ನಂತರ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ವೇತನಾನುದಾನಕ್ಕೆ ಒಳಪಡಿಸಲಾಗುವುದು ಯಾವಾಗ? (ಮಾಹಿತಿ ಒದಗಿಸುವುದು)	ದಿನಾಂಕ :14.01.2020ರಂದು ವಿವಿಧ ಕನ್ನಡ ಮಾಧ್ಯಮ ಶಾಲಾ ವ್ಯವಸ್ಥಾಪಕ ಮಂಡಳಿಗಳ ಪ್ರತಿನಿಧಿಗಳ ಜೊತೆ ನಡೆದ ಸಭೆಯಲ್ಲಿ 1995ರ ನಂತರದಲ್ಲಿ ಪ್ರಾರಂಭವಾದ ಖಾಸಗಿ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ ಸಹಾಯಾನುದಾನಕ್ಕೆ ಒಳಪಡಿಸುವ ಕುರಿತಂತೆ ಚರ್ಚಿಸಲಾಗಿದೆ. 1995 ರಿಂದ 2018ರವರೆಗೆ ಸಂಬಂಧಿಸಿದಂತೆ ಪ್ರತಿ 5 ವರ್ಷದ ಬ್ಲಾಕ್ ಅವಧಿಗೆ ಒಟ್ಟು ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳ ಸಂಖ್ಯೆಯನ್ನು ಅವುಗಳ ಹೆಸರಿನೊಂದಿಗೆ ಮತ್ತು ಒಟ್ಟು ಶಿಕ್ಷಕರುಗಳ ಸಂಖ್ಯೆಯನ್ನು ಹಾಗೂ ಅಂದಾಜು ವೆಚ್ಚದ ಮಾಹಿತಿಯನ್ನು ನೀಡಿದ್ದಲ್ಲಿ ಈ ಬೇಡಿಕೆಯ ಕುರಿತಂತೆ

	ನಿರ್ಣಯಿಸಲು ಸಾಧ್ಯವಾಗುತ್ತದೆ ಎಂದು ಮನಗಂಡು, ಪ್ರತಿ 5 ವರ್ಷಕ್ಕೆ ಸೀಮಿತಗೊಳಿಸಿ ಮಾಹಿತಿಯನ್ನು ಕ್ರೋಢೀಕರಿಸಲು ನಿರ್ಧರಿಸಿದ್ದು, ಅದರಂತೆ ಕ್ರೋಢೀಕೃತ ಮಾಹಿತಿಯನ್ನು ಪಡೆಯಲು ಕ್ರಮಕೈಗೊಳ್ಳಲಾಗಿದೆ.

ಇಡಿ 154 ಪಿಎಂಸಿ 2020

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.